– 22 –
**ಅ. ದಾ. ಸಂ. : 34/2022**
**ಪಿ.ಡಬ್ಲ್ಯೂ : 01**

**ದಿನಾಂಕ : 29-10-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟಿಸವಾಲು :- ಪ್ರತಿವಾದಿಯ ಪರ ಶ್ರೀ.ಜಿ ವಿ ವಕೀಲರಿಂದ** :-

1 ನೇ ಪ್ರತಿವಾದಿಯು ಮಾವಿನ ಕಾಯಿಯನ್ನು ಕಿತ್ತುಕೊಂಡು ಹೋದ ನಂತರ ಅವರ ವಿರುದ್ದ ಪೋಲಿಸ್ ದೂರನ್ನು ಕೊಟ್ಟಿರುತ್ತೀರಾ ಎಂದರೆ ಸಾಕ್ಷಿ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ದೂರಿನ ಪ್ರತಿ ಹಾಗೂ ಪ್ರಥಮ ವರ್ತಮಾನ ವರಧಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೀರಾ ಎಂದರೆ ಸಾಕ್ಷಿ ಹಾಜರು ಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ಈಗ ಸಾಕ್ಷಿಗೆ ನಿಪಿ-1 ರಿಂದ 48 ರ ದಾಖಲೆಗಳನ್ನು ತೋರಿಸಲಾಗಿ ಸದರಿ ದೂರಿನ ಪ್ರತಿ ಹಾಗೂ ಪ್ರಥಮ ವರ್ತಮಾನ ವರಧಿಯ ಪ್ರತಿ ಇದೆಯೆ ಎಂದರೆ ಸಾಕ್ಷಿ ಸದರಿ ದಾಖಲೆಗಳನ್ನು ನೋಡಿ ದೂರಿನ ಪ್ರತಿ ಹಾಗೂ ಪ್ರಥಮ ವರ್ತಮಾನ ವರಧಿ ಇರುವುದಿಲ್ಲ ಎಂದು ನುಡಿಯುತ್ತಾರೆ. 1 ನೇ ಪ್ರತಿವಾದಿಯು ಮಾವಿನಕಾಯಿಗಳನ್ನು ಕೀಳುವುದರ ಬಗ್ಗೆ ದೂರನ್ನು ಕೊಡುವುದಾಗಲಿ ಹಾಗೂ ನಿರ್ಭಂದಕಾಜ್ಞೆ ಆದೇಶದ ಉಲ್ಲಂಘನೆ ಬಗ್ಗೆ ಅರ್ಜಿಯನ್ನು ಸಲ್ಲಿಸಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ದಾವಾಸ್ವತ್ತಿನಲ್ಲಿ 1 ನೇ ಪ್ರತಿವಾದಿಯವರು ಸ್ವಾಧೀನದಲ್ಲಿ ಇರುವುದರಿಂದ ನೀವು ದೂರನ್ನು ಕೊಡುವುದಾಗಲಿ ಹಾಗೂ ಕಂಟೆಂಪ್ಟ್ ಅರ್ಜಿ ಸಲ್ಲಿಸಿರುವುದಿಲ್ಲ ಎಂದರೆ ಸಾಕ್ಷಿ ಸುಳ್ಳು ನಾನೆ ಸ್ವಾಧೀನದಲ್ಲಿ ಇರುತ್ತೇನೆ ಎಂದು ನುಡಿಯುತ್ತಾರೆ. ರಕ್ಷಿತ ರವರು ದಾವಾಸ್ವತ್ತಿನಲ್ಲಿ ಸ್ವಾಧೀನ ಇದ್ದಿರಲಿಲ್ಲ 1 ನೇ ಪ್ರತಿವಾದಿಯೇ ಸ್ವಾಧೀನದಲ್ಲಿ ಇದ್ದರು ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ದಾವಾಸ್ವತ್ತು 1 ನೇ ಪ್ರತಿವಾದಿ ಹಾಗೂ

ಮುನಿರಾಜುರವರ ಒಟ್ಟು ಕುಟುಂಬದ ಸ್ವತ್ತು ಆಗಿದ್ದು ನೀವು ಹಾಗೂ ರಕ್ಷಿತರವರು ಸೇರಿಸಿಕೊಂಡು 1ನೇ ಪ್ರತಿವಾದಿ ಮತ್ತು ಅವರ ಕುಟುಂಬದವರ ಆಸ್ತಿಯನ್ನು ಲಪಟಾಯಿಸಲು ಸುಳ್ಳು ಕ್ರಯಪತ್ರವನ್ನು ಸೃಷ್ಟಿಸಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. 1ನೇ ಪ್ರತಿವಾದಿಯು ವ್ಯವಸಾಯ ಮಾಡುವಾಗ ನೀವೆ ಹೋಗಿ ಅವರಿಗೆ ತೊಂದರೆ ಕೊಡುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿ ಮುಂದುವರೆದು ನಾವು ಸ್ವಾಧೀನದಲ್ಲಿ ಇದ್ದಾಗಅವರೇ ತೊಂದರೆ ಕೊಡುತ್ತಿದ್ದಾರೆ ಎಂದು ನುಡಿಯುತ್ತಾರೆ. ರಕ್ಷಿತರವರೊಂದಿಗೆ ಸುಳ್ಳು ಕ್ರಯಪತ್ರವನ್ನು ಸೃಷ್ಟಿಸಿಕೊಂಡು 1ನೇ ಪ್ರತಿವಾದಿಗೆ ಮೋಸ ಮಾಡಬೇಕೆಂಬ ದೃಷ್ಟಿಸಿಯಿಂದ ಸುಳ್ಳು ದಾವೆಯನ್ನು ಸಲ್ಲಿಸಿರುತ್ತೀರಿ ಎಂದರೆಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಪ್ರ. ಸಿ. ಜ. ಮತ್ತು ಜೆ. ಎಂ. ಎಫ್. ಸಿ.**
**ಮಾಗಡಿ.**